ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

21

ಇಲಾಖೆ / ವಿಷಯ : DEPARTMENT / SUBJECT: ಪ್ರಧಾನ ಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 12/4/21

# ಕೊರೊನಾ ಲಸಿಕೋತ್ಸವ 2ನೇ ದೊಡ್ಡ ಸಮರ

## ಪ್ರಧಾನಿ ನರೇಂದ್ರ ಮೋದಿ ಬಣ್ಣನೆ

ಉವಾ 12/4/21

ನವದೆಹಲಿ: ದೇಶಾದ್ಯಂತ ಆರಂಭವಾಗಿರುವ 'ಲಸಿಕೆ ಉತ್ಸವ'ವು (ಟೀಕಾ ಉತ್ಸವ್) ಕೊರೊನಾ ವಿರುದ್ಧದ ಎರಡನೇ ದೊಡ್ಡ ಯುದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಏ.11ರಿಂದ 14ರವರೆಗೆ ನಡೆಯಲಿರುವ ಉತ್ಸವದ ಮೊದಲ ದಿನವಾದ ಭಾನುವಾರ ಸರಣಿ ಟ್ವೀಟ್‌ಗಳನ್ನು ಮಾಡುವ ಮೂಲಕ ಪ್ರಧಾನಿ ಮೋದಿ ದೇಶವಾಸಿಗಳಿಗೆ ಲಸಿಕೆ ಸ್ವೀಕರಿಸುವಂತೆ ಉತ್ತೇಜನ ನೀಡಿದ್ದಾರೆ. ಅಲ್ಲದೆ, ಸೋಂಕಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ 4 ಅಂಶಗಳ ಸಲಹೆಗಳನ್ನೂ ನೀಡಿದ್ದಾರೆ. 'ಪ್ರತಿಯೊಬ್ಬರ'ೂ ಇತರರಿಗೆ ಲಸಿಕೆ ಹಾಕಿಸಲು ನೆರವಾಗಿ, ಪ್ರತಿಯೊಬ್ಬರೂ ಮತ್ತೊಬ್ಬರ ಚಿಕಿತ್ಸೆಗೆ ಸಹಾಯ ಮಾಡಿ, ಪ್ರತಿಯೊಬ್ಬರೂ ಮತ್ತೊಬ್ಬರನ್ನು ರಕ್ಷಿಸಿ, ಮೈಕ್ರೋ ಕಂಟೈನ್ಮೆಂಟ್ ವಲಯಗಳ ಸೃಷ್ಟಿಗೆ ನೀವೇ ನೇತೃತ್ವ ವಹಿಸಿ' ಎಂದು ಕರೆ ಕೊಟ್ಟಿದ್ದಾರೆ.



ಮೈಕ್ರೋ ಕಂಟೈನ್ಮೆಂಟ್ ವಲಯಗಳ ಬಗ್ಗೆ ನಾವು ಎಷ್ಟು ಎಚ್ಚರಿಕೆ ಹೊಂದಿದ್ದೇವೆ ಎನ್ನುವುದರ ಮೇಲೆ ನಮ್ಮ ಯಶಸ್ಸು ನಿಂತಿದೆ ಎಂದ ಮೋದಿ, ಲಸಿಕೆಯ ಒಂದೇ ಒಂದು ಡೋಸ್ ಕೂಡ ವ್ಯರ್ಥವಾಗದಂತೆ ನೋಡಿಕೊಳ್ಳಬೇಕು. ಈ 4 ದಿನಗಳಲ್ಲಿ ಲಸಿಕೆಗೆ ಟಾರ್ಗೆಟ್ ಹಾಕಿಕೊಂಡು ಗರಿಷ್ಠ ಸಂಖ್ಯೆಯ ಫಲಾನುಭವಿಗಳಿಗೆ ಲಸಿಕೆ ಒದಗಿಸಬೇಕು ಎಂದೂ ಅವರು ಕರೆ ನೀಡಿದ್ದಾರೆ.

### ದೇಶಾದ್ಯಂತ ಉತ್ತಮ ಸ್ಪಂದನೆ

ಲಸಿಕೆ ಉತ್ಸವದ ಮೊದಲ ದಿನ ಉತ್ತರಪ್ರದೇಶದಿಂದ ತಮಿಳುನಾಡಿನವರೆಗೆ ಬಹುತೇಕ ರಾಜ್ಯಗಳಲ್ಲಿ ಉತ್ತಮ ಸ್ಪಂದನೆ ವ್ಯಕ್ತವಾಗಿದೆ. ಮಣಿಪುರ ಸಿಎಂ ಬಿರೇನ್ ಸಿಂಗ್ ಅವರು ತಾವೇ ಸ್ವತಃ ಲಸಿಕೆ ಸ್ವೀಕರಿಸುವ ಮೂಲಕ ಉತ್ಸವಕ್ಕೆ ಚಾಲನೆ ನೀಡಿದ್ದಾರೆ. ಜಾರ್ಖಂಡ್‌ನಲ್ಲಿ ಫಲಾನುಭವಿಗಳು ಸರತಿಯಲ್ಲಿ ನಿಂತು ಲಸಿಕೆ ಪಡೆದಿದ್ದಾರೆ. ಉತ್ತರಪ್ರದೇಶದ 6 ಸಾವಿರ ಕೇಂದ್ರಗಳಲ್ಲಿ ಉತ್ಸವ ಆರಂಭವಾಗಿದ್ದು, ಬಿಹಾರದಲ್ಲಿ 4 ಲಕ್ಷ ಮಂದಿಗೆ ಲಸಿಕೆ ನೀಡುವ ಗುರಿ ಹಾಕಿಕೊಳ್ಳಲಾಗಿದೆ. ಇನ್ನು, ಮಹಾರಾಷ್ಟ್ರ, ಕೇರಳ, ದೆಹಲಿ ಸೇರಿದಂತೆ ಬಹುತೇಕ ರಾಜ್ಯಗಳಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ವ್ಯಾಕ್ಸಿನೇಷನ್‌ನಲ್ಲಿ ಪಾಲ್ಗೊಂಡಿದ್ದಾರೆ. ದಕ್ಷಿಣ ದೆಹಲಿಯ ಫೋರ್ಟಿಸ್ ಆಸ್ಪತ್ರೆಯಲ್ಲಿನ ಲಸಿಕಾ ಕೇಂದ್ರದಲ್ಲಿ ಲಸಿಕೆ ಪಡೆಯಲು ಬಂದಿದ್ದ ಜನತೆ 'ಲಸಿಕೆ ಉತ್ಸವವನ್ನು ನಡೆಸುವುದರಿಂದ ಅನೇಕರಿಗೆ ಲಸಿಕೆ ಸಿಗುವಂತಾಗುತ್ತದೆ. ಈ ಮೂಲಕ ಕೊರೊನಾ ಸೋಂಕನ್ನು ನಿವಾರಿಸಲು ಸಹಾಯವಾಗುತ್ತದೆ' ಎಂದು ಹರ್ಷ ವ್ಯಕ್ತಪಡಿಸಿದರು. ಉತ್ತರ ಪ್ರದೇಶದಲ್ಲಿ ಸುಮಾರು ಲಸಿಕೋತ್ಸವಕ್ಕಾಗಿ ಸುಮಾರು 6 ಸಾವಿರ ಹೆಚ್ಚುವರಿ ಲಸಿಕಾ ಕೇಂದ್ರಗಳನ್ನು ತೆರೆಯಲಾಗಿತ್ತು.

### ಪ್ರಧಾನಿ ನಾಲ್ಕು ಅಂಶಗಳ ಸಲಹೆ

**1 ಪ್ರತಿಯೊಬ್ಬರೂ ಲಸಿಕೆ ಹಾಕಿಸಿ**

ಅನಕ್ಷರಸ್ಥರು, ಹಿರಿಯ ನಾಗರಿಕರು ಸೇರಿದಂತೆ ಯಾರಿಗೆ ತಾವಾಗಿಯೇ ಹೊರಹೋಗಿ ಲಸಿಕೆ ಹಾಕಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲವೋ, ಅಂಥವರಿಗೆ ಪ್ರತಿಯೊಬ್ಬರೂ ನೆರವಾಗಬೇಕು.

**2 ಪ್ರತಿಯೊಬ್ಬರೂ ಚಿಕಿತ್ಸೆಗೆ ನೆರವಾಗಿ**

ಕೊರೊನಾ ಸೋಂಕಿಗೆ ಚಿಕಿತ್ಸೆ ಪಡೆಯಲು ಸೂಕ್ತ ಸಂಪನ್ಮೂಲಗಳಿಲ್ಲದ ಅಥವಾ ಅದರ ಬಗ್ಗೆ ಹೆಚ್ಚಿನ ಅರಿವಿಲ್ಲದ ಜನರಿಗೆ ಚಿಕಿತ್ಸೆ ಕೊಡಿಸಲು ನೆರವು ನೀಡಬೇಕು.

**3 ಪ್ರತಿಯೊಬ್ಬರೂ ರಕ್ಷಿಸಿ**

ಎಲ್ಲರೂ ಕೂಡ 'ನಾನು ಮಾಸ್ಕ್ ಧರಿಸಬೇಕು. ಆ ಮೂಲಕ ನಾನು ನನ್ನನ್ನು ಮಾತ್ರವಲ್ಲದೇ, ಇತರರ ಜೀವವನ್ನೂ ರಕ್ಷಿಸುತ್ತೇನೆ' ಎಂದು ಶಪಥ ಮಾಡಿಕೊಳ್ಳಬೇಕು.

**4 ಮೈಕ್ರೋ ಕಂಟೈನ್ಮೆಂಟ್ ವಲಯದ ಸೃಷ್ಟಿ**

ಕುಟುಂಬ ಸದಸ್ಯರು ಮತ್ತು ಸಮುದಾಯದ ಸದಸ್ಯರು ಒಂದು ಪಾಸಿಟಿವ್ ಕೇಸ್ ಬಂದರೂ 'ಮೈಕ್ರೋ ಕಂಟೈನ್ಮೆಂಟ್ ವಲಯ'ವನ್ನು ಸೃಷ್ಟಿಸಿಕೊಳ್ಳಬೇಕು. ಭಾರತದಂತಹ ಜನಸಂಖ್ಯೆ ಹೆಚ್ಚಿರುವ ದೇಶಗಳಲ್ಲಿ ಸೋಂಕಿಗೆ ಕಡಿವಾಣ ಹಾಕಲು ಇದೊಂದು ಪ್ರಮುಖ ಹೆಜ್ಜೆಯಾಗಿದೆ.